# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 31-03-2021 ಪ್ರಶ್ನೆ ಸಂಖ್ಯೆ : 3046 (2505)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 31-03-2021

ಉತ್ತರಿಸುವ ಸಚಿವರು: ಕಂದಾಯ ಸಚಿವರು

ವಿಷಯ : ಕೊಡಗು ಜಿಲ್ಲೆಯಲ್ಲಿನ ಪೊನ್ನಂಪೇಟೆ ಮತ್ತು ಕುಶಾಲನಗರ ಹೊಸ ತಾಲ್ಲೂಕುಗಳ ಕಾರ್ಯಾರಂಭ ಕುರಿತು

(ಅ) ಕೊಡಗು ಜಿಲ್ಲೆಯಲ್ಲಿ, ಹೊಸದಾಗಿ ಸೃಷ್ಟಿಸಿದ ಪೊನ್ನಂಪೇಟೆ ಮತ್ತು ಕುಶಾಲನಗರ ತಾಲ್ಲೂಕುಗಳು ಅಧಿಕೃತವಾಗಿ ಕಾರ್ಯಾರಂಭವಾಗಿದೆಯೇ;

(ಆ) ಕಾರ್ಯಾರಂಭ ಮಾಡಿದ್ದಲ್ಲಿ, ಸದರಿ ತಾಲ್ಲೂಕುಗಳಿಗೆ ಅಗತ್ಯ ಕಛೇರಿಗಳು, ಸಿಬ್ಬಂದಿಗಳು ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಅತ್ಯವಶ್ಯವಿರುವ ಇತರೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ; (ವಿವರ ನೀಡುವುದು)

(ಇ) ಮೂಲಭೂತ ಸೌಕರ್ಯಗಳನ್ನು ಇದುವರೆಗೂ ಕಲ್ಪಿಸದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಅವುಗಳನ್ನು ಕಲ್ಪಿಸಲಾಗುವುದು?